ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ **(Unstarred)**	:	392
ಸದಸ್ಯರ ಹೆಸರು	:	ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	15.09.2021
ಉತ್ತರಿಸುವ ಸಚಿವರು	:	ಮಾನ್ಯ ಲೋಕೋಪಯೋಗಿ ಸಚಿವರು

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ)	ಕಲ್ಯಾಣ ಕರ್ನಾಟಕ ಜಿಲ್ಲೆಯಲ್ಲಿ ಖಾಲಿ ಇರುವ ವಿವಿಧ ವೃಂದದ ಲೋಕೋಪಯೋಗಿ ಇಲಾಖೆಯಲ್ಲಿನ ಹುದ್ದೆಗಳ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)	ಲೋಕೋಪಯೋಗಿ ಇಲಾಖೆಯಲ್ಲಿ ಕಲ್ಯಾಣ ಕರ್ನಾಟಕ ಜಿಲ್ಲೆಗಳಾದ ಕಲಬುರಗಿ, ಯಾದಗಿರಿ,ಬೀದರ್,ಬಳ್ಳಾರಿ, ವಿಜಯನಗರ, ರಾಯಚೂರು, ಕೊಪ್ಪಳ ಜಿಲ್ಲೆಗಳಲ್ಲಿ ಈ ಕೆಳಕಂಡಂತೆ ವಿವಿಧ ವೃಂದಗಳಲ್ಲಿ ಹುದ್ದೆಗಳು ಖಾಲಿ ಇರುತ್ತವೆ. (see table below)

ಜಿಲ್ಲೆ	ಖಾಲಿ ಹುದ್ದೆಗಳು			
	ಗ್ರೂಪ್-ಎ	ಗ್ರೂಪ್-ಬಿ	ಗ್ರೂಪ್-ಸಿ	ಗ್ರೂಪ್-ಡಿ
ಕಲಬುರಗಿ	1	7	33	2
ಯಾದಗಿರ	-	1	4	2
ಬೀದರ	-	-	2	-
ಬಳ್ಳಾರಿ	-	9	11	-
ವಿಜಯನಗರ	1	6	10	4
ರಾಯಚೂರು	-	5	11	3
ಕೊಪ್ಪಳ	-	7	14	3
	02	35	85	14

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಆ)	ಲೋಕೋಪಯೋಗಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳು ಭರ್ತಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು. (ವಿವರ ನೀಡುವುದು)	ಸರ್ಕಾರದ ಆದೇಶ ಸಂಖ್ಯೆ:ಲೋಇ:41:ಸೇಸೇವ:2014 ದಿ:10-11-2016 ರಲ್ಲಿ ಈ ಮೇಲೆ ತಿಳಿಸಿರುವಂತೆ ಗ್ರೂಪ್-ಎ,ಬಿ,ಸಿ,ಡಿ ವೃಂದದ ಹುದ್ದೆಗಳನ್ನು ಗುರುತಿಸಲಾಗಿದ್ದು, ಈ ಹುದ್ದೆಗಳ ಪೈಕಿ ಸಹಾಯಕ ಇಂಜಿನಿಯರ್ ವೃಂದದಲ್ಲಿ 151 ಹುದ್ದೆಗಳನ್ನು ಹಾಗೂ ಕಿರಿಯ ಇಂಜಿನಿಯರ್ ವೃಂದದಲ್ಲಿ 141 ಹುದ್ದೆಗಳನ್ನು ಗುರುತಿಸಿದ್ದು, ಈ ಹುದ್ದೆಗಳಲ್ಲಿ 60 ಸಹಾಯಕ ಇಂಜಿನಿಯರ್ ಹಾಗೂ 05 ಕಿರಿಯ ಇಂಜಿನಿಯರ್ ಹುದ್ದೆಗಳು ನೌಕರರ ಬಡ್ತಿಯಿಂದ ಖಾಲಿ ಆಗಿದ್ದು, ಸದರಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗಿದೆ ಹಾಗೂ ಆರ್ಟಿಕಲ್ 371 ಜೆ ಅಡಿ ಸರ್ಕಾರದ ಅಧಿಸೂಚನೆಯಲ್ಲಿ ಗುರುತಿಸಿ ಸ್ಥಳೀಯ ವೃಂದಕ್ಕೆ ಗ್ರೂಪ್-ಎ,ಬಿ,ಸಿ,ಡಿ ಹುದ್ದೆಗಳು ಹಂಚಿಕೆಯಾದ ನಂತರ ಮಿಕ್ಕುಳಿದ ವೃಂದದ ಹುದ್ದೆಗಳು ಮೇಲ್ಕಂಡಂತೆ ಖಾಲಿ ಆಗಿದ್ದು, ಈ ಹುದ್ದೆಗಳು ಕಲ್ಯಾಣ ಕರ್ನಾಟಕ ಭಾಗಕ್ಕೆ ಸ್ಥಳೀಯ ವೃಂದಕ್ಕೆ ಹಂಚಿಕೆ ಮಾಡಿ ಗುರುತಿಸಿರುವ ಹುದ್ದೆಗಳಾಗಿರುವುದಿಲ್ಲ. ಲೋಕೋಪಯೋಗಿ ಇಲಾಖೆಯಲ್ಲಿನ ಆರ್ಟಿಕಲ್ 371 ಜೆ ರನ್ವಯ ನೇರ ನೇಮಕಾತಿ ಅಡಿ ಖಾಲಿ ಇರುವ ಹುದ್ದೆಗಳ ಪೈಕಿ ಗ್ರೂಪ್-ಬಿ ವೃಂದದ ಸಹಾಯಕ ಇಂಜಿನಿಯರ್ ಹುದ್ದೆ ಹಾಗೂ ಗ್ರೂಪ್-ಸಿ ಕಿರಿಯ ಇಂಜಿನಿಯರ್ ಹುದ್ದೆಗಳನ್ನು ಕರ್ನಾಟಕ ಲೋಕ-ಸೇವಾ ಆಯೋಗದ ಮುಖಾಂತರ ಭರ್ತಿ ಮಾಡಲು ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣ ಸಂಖ್ಯೆ 9466/2020 ದಾಖಲಾಗಿರುವ ಕಾರಣ ಪ್ರಸ್ತುತ ಸದರಿ ಪ್ರಕರಣವು ಬಾಕಿ ಇದ್ದು ಇತ್ಯರ್ಥಗೊಂಡ ನಂತರ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗುವುದು, ಮುಂದುವರೆದು, ಕರ್ನಾಟಕ ಪ್ರದೇಶದವರಿಗಾಗಿ ರಾಜ್ಯ ವ್ಯಾಪ್ತಿ ಸ್ಥಳೀಯ ವೃಂದ ರಚಿಸಿ ಹೊರಡಿಸಲಾಗಿರುವ ಅಧಿಸೂಚನೆಯಲ್ಲಿ ನೇರ ನೇಮಕಾತಿ ಪಾಲಿನ 98 ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗಳ ಪೈಕಿ 12 ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ವಿಭಾಗ-1) ಹುದ್ದೆಗಳನ್ನು ಹೈದಾಬಾದ್ ಕರ್ನಾಟಕ ಪ್ರದೇಶದವರಿಗಾಗಿ ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.

ಇ)	ಹೊಸದಾಗಿ ನೇಮಕಾತಿ ಪ್ರಕ್ರಿಯೆ ನಡೆಸಲು ಸರ್ಕಾರ ಚಿಂತಿಸಿದೆಯೇ ? (ಸ್ಪಷ್ಟವಾದ ಮಾಹಿತಿ ನೀಡುವುದು)	ಪ್ರಸ್ತುತ, ಲೋಕೋಪಯೋಗಿ ಇಲಾಖೆಯಲ್ಲಿ ಮಿಕ್ಕುಳಿದ ವೃಂದದಲ್ಲಿ ಖಾಲಿ ಇರುವ ಹುದ್ದೆಗಳಾದ ಗ್ರೂಪ್-ಎ,ಬಿ,ಸಿ,ಡಿ ವೃಂದದ ಹುದ್ದೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ಮತ್ತು ಗ್ರೂಪ್-ಸಿ ವೃಂದದ ಪ್ರದಸ/ದ್ವಿದಸ ಹುದ್ದೆಗಳನ್ನು ಅನುಕಂಪದ ಆಧಾರದ ಮೇಲೆ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ. ಮುಂದುವರೆದು, 12 ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ವಿಭಾಗ-1) ಹುದ್ದೆಗಳನ್ನು ಹೈದಾಬಾದ್ ಕರ್ನಾಟಕ ಪ್ರದೇಶದವರಿಗಾಗಿ ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಬೇಕಾಗಿದ್ದು ಈ ಕುರಿತು ಕರ್ನಾಟಕ ಲೋಕ ಸೇವಾ ಆಯೋಗ ಮತ್ತು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆಯೊಂದಿಗೆ ಸಮಾಲೋಚನೆ ನಡೆಸಲಾಗುತ್ತಿದೆ.

ಸಂಖ್ಯೆ: ಲೋಇ 22 ಸೇವಿಇ 2021

(ಸಿ.ಸಿ. ಪಾಟೀಲ್)
ಲೋಕೋಪಯೋಗಿ ಸಚಿವರು